# ಕರ್ನಾಟಕ ವಿಧಾನ ಪರಿಷತ್ತು

**ಕಡತ ಸಂಖ್ಯೆ:ಕಂಇ 4 ಮುಸಪ್ರ 2024**

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:** | **29(122)*** |
| **ಸದಸ್ಯರ ಹೆಸರು:** | ಶ್ರೀ ಎಸ್.ರವಿ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| **ವಿಷಯ:** | ಘಾಟಿ ಸುಬ್ರಹ್ಮಣ್ಯ ದೇವಸ್ಥಾನದ ಅಭಿವೃದ್ಧಿ ಕುರಿತು. |
| **ಉತ್ತರಿಸಬೇಕಾದ ದಿನಾಂಕ:** | 14.02.2024 |
| **ಉತ್ತರಿಸಬೇಕಾದ ಸಚಿವರ ಹೆಸರು:** | ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು |

********

| ಪ್ರಶ್ನೆ | | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ಘಾಟಿ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ವಾರ್ಷಿಕ 60 ರಿಂದ 70 ಲಕ್ಷ ಭಕ್ತಾಧಿಗಳು ಆಗಮಿಸುತ್ತಿದ್ದು, ಈ ದೇವಸ್ಥಾನದ ವಾರ್ಷಿಕ ಸರಾಸರಿ ರೂ. 8.00 ಕೋಟಿ ಆದಾಯ ಸರ್ಕಾರಕ್ಕೆ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕಿನ ಘಾಟಿ ಶ್ರೀ ಸುಬ್ರಹ್ಮಣ್ಯ ದೇವಸ್ಥಾನಕ್ಕೆ ವಾರ್ಷಿಕವಾಗಿ ಅಂದಾಜು 12 ಲಕ್ಷ ಭಕ್ತಾಧಿಗಳು ಭೇಟಿ ನೀಡುತ್ತಾರೆ. ಸಾಮಾನ್ಯ ದಿನಗಳಲ್ಲಿ ಅಂದಾಜು 2000, ಮಂಗಳವಾರ 7000, ಭಾನುವಾರ 10,000 ರಜಾ ದಿನಗಳು 5000, ರಥೋತ್ಸವ ದಿನದಂದು 30,000 ಮತ್ತು ಇತರೆ ವಿಶೇಷ ದಿನಗಳಂದು 6000 ಭಕ್ತಾಧಿಗಳು ಭೇಟಿ ನೀಡಲಿದ್ದಾರೆ. ಈ ದೇವಾಲಯಕ್ಕೆ ವಾರ್ಷಿಕವಾಗಿ ಸರಾಸರಿ ರೂ. 12.25 ಕೋಟಿ ರೂಪಾಯಿಗಳ ಆದಾಯ ದೇವಾಲಯಕ್ಕೆ ಬರುತ್ತಿದೆ.<br><br>ಕರ್ನಾಟಕ ರಾಜ್ಯದ ಮುಜರಾಯಿ ದೇವಾಲಯಗಳಿಗೆ ಬರುವ ಆದಾಯವನ್ನು ಸರ್ಕಾರಕ್ಕೆ ಜಮೆ ಮಾಡಲಾಗುವುದಿಲ್ಲ. ಬದಲಾಗಿ ದೇವಾಲಯಗಳಲ್ಲಿ ಸಂಗ್ರಹವಾಗುವ ಆದಾಯ ವನ್ನು ಆಯಾ ದೇವಾಲಯಗಳ ಸಿಬ್ಬಂದಿ ವೇತನ, ದಿನನಿತ್ಯದ ಪೂಜೆ, ವಿಶೇಷ ಪೂಜೆ, ರಥೋತ್ಸವ ಹಾಗೂ ಉಳಿದ ಹಣವನ್ನು ದೇವಾಲಯದ ಅಭಿವೃದ್ಧಿಗಾಗಿ ಬಳಸಲಾಗುತ್ತದೆ. |
| ಆ) | ಈ ದೇವಸ್ಥಾನವು ಸರ್ವಾಂಗೀಣ ಅಭಿವೃದ್ಧಿಯಾಗಿದಿರುವುದು ಮತ್ತು ಇಲ್ಲಿ ಸಾರ್ವಜನಿಕರಿಗೆ ಸೂಕ್ತ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ದೇವಸ್ಥಾನವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ದೊಡ್ಡಬಳ್ಳಾಪುರ ತಾಲ್ಲೂಕು ಘಾಟಿ ಶ್ರೀ ಸುಬ್ರಹ್ಮಣ್ಯಸ್ವಾಮಿ ದೇವಾಲಯಕ್ಕೆ ದರ್ಶನಕ್ಕಾಗಿ ಬರುವ ಸಾರ್ವಜನಿಕರು ಹಾಗೂ ಭಕ್ತಾಧಿಗಳ ಅನುಕೂಲಕ್ಕಾಗಿ ಸರತಿ ಸಾಲಿನ ವ್ಯವಸ್ಥೆ, ಶುದ್ಧ ಕುಡಿಯುವ ನೀರು, ವಾಹನ ನಿಲ್ದಾಣ, ವಸತಿ ಗೃಹಗಳು, ಶೌಚಾಲಯ, ಮುಡಿ ಭವನ, ದಾಸೋಹದಂತಹ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ.<br><br>ಇತ್ತೀಚಿನ ದಿನಗಳಲ್ಲಿ ದೇವಾಲಯಕ್ಕೆ ಭೇಟಿ ನೀಡುವ ಭಕ್ತಾಧಿಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿರುತ್ತದೆ. 65 ವರ್ಷ ಮೇಲ್ಪಟ್ಟವರಿಗೆ ಹಾಗೂ ವಿಕಲ ಚೇತನರಿಗೆ ಹಾಗೂ ಒಂದು ವರ್ಷದ ಒಳಗಿನ ಮಗುವಿನೊಂದಿಗೆ ಬರುವ ಮಾತೆಯರಿಗೆ |

| | | |
|---|---|---|
| | | ಈಗ ಇರುವ ಮೂಲಭೂತ ಸೌಕರ್ಯಗಳ ಜೊತೆಗೆ ದೇವಾಲಯಕ್ಕೆ ಹೆಚ್ಚಾಗಿ ಆಗಮಿಸುತ್ತಿರುವ ಭಕ್ತಾಧಿಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ದೃಷ್ಠಿಯಿಂದ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು<br><br>1. ಹಾಲೀ ಕಿರಿದಾಗಿರುವ ರಸ್ತೆಯ ಅಗಲೀಕರಣ.<br><br>2.ವಾಹನ ಪಾರ್ಕಿಂಗ್ ಗಾಗಿ ಅಗತ್ಯವಿರುವ ಹೆಚ್ಚುವರಿ ಜಮೀನನ್ನು ಖರೀದಿಸಿ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳು ನಿಲ್ಲಿಸಲು ಅನುವಾಗುವಂತೆ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವುದು<br><br>3.ಹಾಲೀ ಇರುವ ದಾಸೋಹ ಭವನ ಚಿಕ್ಕದಾಗಿದ್ದು, ಹೊಸದಾಗಿ ದೊಡ್ಡದಾದ ಹಾಗೂ ಸುಸಜ್ಜಿತವಾದ ದಾಸೋಹ ಭವನ ನಿರ್ಮಿಸುವುದು.<br><br>4. ದೇವಾಲಯದ ಮುಂಭಾಗ ಕಾಂಪೌಂಡ್ ನಿರ್ಮಿಸುವುದು.<br><br>ಈ ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಾಸ್ಟರ್ ಪ್ಲಾನ್ ತಯಾರಿಸಲಾಗಿದ್ದು, ಇದರಂತೆ ದೇವಾಲಯದ ಸರ್ವಾಂಗೀಣ ಅಭಿವೃದ್ಧಿ ಕೈಗೊಳ್ಳಲಾಗುವುದು. |

ಕಡತ ಸಂಖ್ಯೆ ಕಂಇ 4 ಮುಸಪು 2024

(ರಾಮಲಿಂಗಾರೆಡ್ಡಿ),
**ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು.**